## ಕರ್ನಾಟಕ ಸರ್ಕಾರ

**ವಿಷಯ:** ರಾಜ್ಯ ಸರ್ಕಾರದ ವತಿಯಿಂದ "ನಾಗರಿಕ ಸೇವಾ ದಿನ" ವನ್ನು "ರಾಜ್ಯ ಸರ್ಕಾರಿ ನೌಕರರ ದಿನ" ವನ್ನಾಗಿ ಆಚರಿಸುವ ಬಗ್ಗೆ.

**ಓದಲಾಗಿದೆ :** ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು ಇವರ ಮನವಿ ದಿನಾಂಕ: 10.09.2020

*****

**ಪ್ರಸ್ತಾವನೆ:**

ಮೇಲೆ ಓದಲಾದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರು ಮನವಿಯನ್ನು ಸಲ್ಲಿಸಿ, ಕರ್ನಾಟಕ ಸರ್ಕಾರವು ರಾಜ್ಯದ ನಾಡು, ನುಡಿ, ನೆಲ, ಜಲ, ಸಂಸ್ಕೃತಿ ಹಾಗೂ ಶೈಕ್ಷಣಿಕ ಕ್ಷೇತ್ರದಲ್ಲಿ ನೀಡುವ ಕೊಡುಗೆಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ, ಗಣ್ಯರ ನೆನಪಿಗಾಗಿ ದಿನಾಚರಣೆ ಹಾಗೂ ಜಯಂತಿಗಳನ್ನು ಆಚರಿಸುತ್ತಾ ಬಂದಿದೆ. ಅದೇ ರೀತಿ ಕಾರ್ಯಾಂಗದ ಆಧಾರ ಸ್ತಂಭವಾಗಿರುವ ರಾಜ್ಯ ಸರ್ಕಾರಿ ನೌಕರರನ್ನು ಪ್ರೋತ್ಸಾಹಿಸುವ ಹಾಗೂ ಕರ್ತವ್ಯದಲ್ಲಿ ಒತ್ತಡ ನಿವಾರಿಸಿ, ಕ್ರಿಯಾಶೀಲತೆ ಮೂಡಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರದಿಂದ ಆಚರಿಸುತ್ತಿರುವ ಕೇಂದ್ರ ಸರ್ಕಾರಿ ನೌಕರರ ದಿನಾಚರಣೆ ಯಂತೆಯೇ ರಾಜ್ಯದಲ್ಲೂ, ರಾಜ್ಯ ಸರ್ಕಾರಿ ನೌಕರರ ದಿನಾಚರಣೆಯನ್ನು ಪ್ರತಿ ವರ್ಷ ನಿಗಧಿತ ದಿನಾಂಕದಂದು ಆಚರಿಸುವಂತೆ ಮತ್ತು ಆ ದಿನದಂದು ಅಪ್ರತಿಮ ಸಾಧನೆಗೈದ ರಾಜ್ಯ ಸರ್ಕಾರಿ ನೌಕರರಿಗೆ ಈಗಾಗಲೇ ಪ್ರತಿ ವರ್ಷ ಜನವರಿ 26 ರಂದು "ಗಣರಾಜ್ಯೋತ್ಸವ ದಿನ" ದಂದು ನೀಡುತ್ತಿರುವ "ಸರ್ವೋತ್ತಮ ಸೇವಾ ಪ್ರಶಸ್ತಿ"ಯನ್ನು "ರಾಜ್ಯ ಸರ್ಕಾರಿ ನೌಕರರ ದಿನಾಚರಣೆ"ಯಂದು ಪ್ರಧಾನ ಮಾಡುವಂತೆ ಮನವಿ ಸಲ್ಲಿಸಿರುತ್ತಾರೆ.

ಕೇಂದ್ರ ಸರ್ಕಾರವು ಭಾರತೀಯ ಆಡಳಿತ ಸೇವೆಗೆ ಸೇರಿದವರನ್ನು ಅಂದಿನ ಕೇಂದ್ರದ ಪ್ರಥಮ ಗೃಹ ಸಚಿವರಾದ ಸರ್ದಾರ್ ವಲ್ಲಭ ಭಾಯ್ ಪಟೇಲ್ ರವರು 1947ರ ಏಪ್ರಿಲ್ 21ರಂದು ಆಡಳಿತ ಸೇವೆಗೆ ಸೇರಿದ ಪ್ರೋಬೆಷನರ್ ಅಧಿಕಾರಿಗಳನ್ನುದ್ದೇಶಿಸಿ ಭಾಷಣ ಮಾಡಿದ ದಿನವನ್ನು ಕೇಂದ್ರ ಸರ್ಕಾರವು "ಸಿವಿಲ್ ಸರ್ವೀಸ್ ಡೇ" ಯನ್ನಾಗಿ ಆಚರಣೆ ಮಾಡಲಾಗುತ್ತಿದೆ.

ಈ ಬಗ್ಗೆ ಪರಿಶೀಲಿಸಲಾಗಿ, ರಾಜ್ಯ ಸರ್ಕಾರಿ ನೌಕರರ ದಿನಾಚರಣೆಯು ರಾಜ್ಯ ಸರ್ಕಾರದ ಕಾರ್ಯಾಂಗದ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ಆಡಳಿತ ಸೇವ ಅಧಿಕಾರಿಗಳೂ ಸೇರಿದಂತೆ ರಾಜ್ಯ ಮಟ್ಟದ / ಜಿಲ್ಲಾ ಮಟ್ಟದ / ತಾಲ್ಲೂಕು ಮಟ್ಟದ ಎಲ್ಲಾ ಅಧಿಕಾರಿ / ನೌಕರರನ್ನು ಒಳಗೊಂಡು ದಿನಾಚರಣೆಯನ್ನು ಆಚರಿಸಲು ಉದ್ದೇಶಿಸಲಾಗಿದೆ.

ಆದ್ದರಿಂದ, ಕೇಂದ್ರ ಸರ್ಕಾರದ ಮಾದರಿಯನ್ವಯ ರಾಜ್ಯದಲ್ಲಿ "ನಾಗರಿಕ ಸೇವಾ ದಿನ" ವನ್ನು "ರಾಜ್ಯ ಸರ್ಕಾರಿ ನೌಕರರ ದಿನಾಚರಣೆ" ಯನ್ನಾಗಿ ಪ್ರತಿ ವರ್ಷ ಏಪ್ರಿಲ್ 21 ರಂದು ನಿಗಧಿ ಪಡಿಸಿ ವಿವಿಧ ಕಾರ್ಯಕ್ರಮಗಳ ಮೂಲಕ ದಿನಾಚರಣೆಯನ್ನು ಆಚರಿಸಿ, ಅತ್ಯುತ್ತಮ ಸೇವೆ ಸಲ್ಲಿಸಿದ ನೌಕರರಿಗೆ ಈಗಾಗಲೇ ಪ್ರತಿ ವರ್ಷ ವಿವಿಧ ಹಂತಗಳಲ್ಲಿ ಜನವರಿ 26 "ಗಣರಾಜ್ಯೋತ್ಸವ ದಿನ" ದಂದು ನೀಡುತ್ತಿರುವ "ಸರ್ವೋತ್ತಮ ಸೇವಾ ಪ್ರಶಸ್ತಿ" ಯನ್ನು" ರಾಜ್ಯ ಸರ್ಕಾರಿ ನೌಕರರ ದಿನಾಚರಣೆ"ಯಂದು ನೀಡುವುದರ ಮೂಲಕ ಅವಿಸ್ಮರಣೀಯ ಗೊಳಿಸಲು ತೀರ್ಮಾನಿಸಿದೆ

Maqbool Lingadahalli
KSPSTA Hanagal

ಮೇಲಿನ ಎಲ್ಲಾ ಅಂಶಗಳನ್ನು ಪರಿಶೀಲಿಸಿ, ಸನ್ಮಾನ್ಯ ಮುಖ್ಯಮಂತ್ರಿಗಳು ಕೇಂದ್ರ ಸರ್ಕಾರದ ರೀತಿಯಲ್ಲಿ ರಾಜ್ಯದಲ್ಲೂ ಸಹ ಪ್ರತಿ ವರ್ಷ ಏಪ್ರಿಲ್ 21 ರಂದು ರಾಜ್ಯ ಸರ್ಕಾರಿ ನೌಕರರ ದಿನಾಚರಣೆಯನ್ನು ರಾಜ್ಯ ಮತ್ತು ಜಿಲ್ಲಾ ಹಂತದಲ್ಲಿ ಆಚರಿಸಲು ಒಪ್ಪಿರುತ್ತಾರೆ ಹಾಗೂ ಅಂದಿನ ದಿನ ಅತ್ಯುತ್ತಮ ಸೇವೆ ಸಲ್ಲಿಸಿದ ರಾಜ್ಯ ಸರ್ಕಾರಿ ನೌಕರರಿಗೆ ಪ್ರಧಾನ ಮಾಡುವ "ಸರ್ವೋತ್ತಮ ಸೇವಾ ಪ್ರಶಸ್ತಿ" ಯನ್ನು ವಿವಿಧ ಹಂತಗಳಲ್ಲಿ ನೀಡುವ ಮೂಲಕ ಪ್ರೋತ್ಸಾಹಿಸುವಂತೆ ಸೂಚಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶದ ಸಂಖ್ಯೆ: ಸಿಆಸುಇಆಸು 33 ಈಕಾಅ 2020,**
**ಬೆಂಗಳೂರು, ದಿನಾಂಕ: 18.01.2021.**

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ನಂತರ ಸರ್ಕಾರ ಪ್ರತಿ ವರ್ಷ ಏಪ್ರಿಲ್ 21 ರಂದು "ನಾಗರೀಕ ಸೇವಾ ದಿನ" ವನ್ನು "ರಾಜ್ಯ ಸರ್ಕಾರಿ ನೌಕರರ ದಿನಾಚರಣೆ" ಯನ್ನಾಗಿ ಆಚರಿಸಲು ಹಾಗೂ ಈಗಾಗಲೇ ಅತ್ಯುತ್ತಮ ಸೇವೆ ಸಲ್ಲಿಸಿದ ನೌಕರರಿಗೆ ಪ್ರತಿ ವರ್ಷ "ಗಣರಾಜ್ಯೋತ್ಸವ ದಿನ" ದಂದು ನೀಡುತ್ತಿರುವ, "ಸರ್ವೋತ್ತಮ ಸೇವಾ ಪ್ರಶಸ್ತಿ" ಯನ್ನು ಏಪ್ರಿಲ್ 21ರ "ರಾಜ್ಯ ಸರ್ಕಾರಿ ನೌಕರರ ದಿನಾಚರಣೆ" ಯಂದು ನಿಗಧಿತ ಶಿಷ್ಟಾಚಾರವನ್ನು ಅನುಸರಿಸಿ ಪ್ರದಾನ ಮಾಡಲು ಕ್ರಮ ಕೈಗೊಳ್ಳುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

N. S Gayathri Devi 19/01/2021

(ಎನ್.ಎಸ್.ಗಾಯತ್ರಿದೇವಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ ಮತ್ತು ಕಾರ್ಯಾಧ್ಯಯನ)

**ಇವರಿಗೆ,**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ-ಇವರಿಗೆ ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸುವ ಸಲುವಾಗಿ ಕಳುಹಿಸಲಾಗಿದೆ ಹಾಗೂ ಇದರ 300 ಪ್ರತಿಗಳನ್ನು ಸರ್ಕಾರದ ಕಾರ್ಯದರ್ಶಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ), ಕೊ.ಸಂ.612, 6ನೇ ಮಹಡಿ, 1ನೇ ಹಂತ, ಬಹುಮಹಡಿ ಕಟ್ಟಡ ಬೆಂಗಳೂರು-01 ಇವರಿಗೆ ಒದಗಿಸುವಂತೆ ಕೋರಿದೆ.

1. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
4. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯಿತಿ ಕಾರ್ಯನಿರ್ವಾಹಣಾ ಅಧಿಕಾರಿಗಳು
5. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
6. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ

Maqbool Lingadahalli
KSPSTA Hanagal